2008–09ನೇ ಸಾಲಿಗೆ ಎಸ್‌ಎಫ್‌ಸಿ ಮುಕ್ತನಿಧಿ ಅನುದಾನ ರೂ.1,59,44.925 ಕೋಟಿಗಳನ್ನು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತು ರೂ.50.00 ಲಕ್ಷಗಳ ವಿಶೇಷ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. 2009–10ನೇ ಸಾಲಿಗೆ ಎಸ್.ಎಫ್.ಸಿ. ರೂ.246.64 ಲಕ್ಷಗಳ ಹಂಚಿಕೆ ಮಾಡಿದೆ.

<u>ಕರ್ನಾಟಕ ವಿಧಾನ ಸಭೆ</u>

360 ಶ್ರೀ ಸಂಪಂಗಿ.ಎನ್.(ಬಾಗೇಪಲ್ಲಿ)

ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು

ಅ) ಬಾಗೇಪಲ್ಲಿ ಮತಕ್ಷೇತ್ರದ ಗುಡಿಬಂಡೆ ಪಟ್ಟಣ ಪಂಚಾಯ್ತಿ ನಂಜುಂಡಪ್ಪ ವರದಿಯಂತೆ ಹಿಂದುಳಿದ ಪ್ರದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.

ಆ) ಈ ಪಟ್ಟಣ ಪಂಚಾಯ್ತಿ ಸರಿಯಾದ ರೀತಿಯಲ್ಲಿ ಅಭಿವೃದ್ಧಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಗುಡಿಬಂಡೆ ಪಟ್ಟಣವನ್ನು ಅಭಿವೃದ್ಧಿಪಡಿಸಲು ಮಾನ್ಯ ಮುಖ್ಯಮಂತ್ರಿಯವರ ಸಣ್ಣ ಮತ್ತು ಮದ್ಯಮ ಪಟ್ಟಣ ಅಭಿವೃದ್ಧಿ ಯೋಜನೆಯಲ್ಲಿ ಪರಿಗಣಿತವಾಗಿರುತ್ತದೆ. 2009–10ನೇ ಸಾಲಿನಲ್ಲಿ ಪಟ್ಟಣದಲ್ಲಿ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಈ ಯೋಜನೆಯಡಿಯಲ್ಲಿ ರೂ. 2.00 ಕೋಟಿ ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ.

ಗುಡಿಬಂಡೆ ಪಟ್ಟಣಕ್ಕೆ ಪ್ರಸ್ತುತ ಕುಡಿಯುವ ನೀರಿನ ಸರಬರಾಜನ್ನು ಉತ್ತರ ಪಿನಾಕಿನಿ ನದಿ ಮೂಲದಿಂದ ಚಿತ್ರಾವತಿ ಬ್ಯಾರೇಜ್ ಮೂಲಕ ನಿರ್ವಹಿಸಲಾಗುತ್ತಿದ್ದು ಸರಬರಾಜು ತೃಪ್ತಿಕರ ವಿದ್ದು ನೀರಿನ ಕೊರತೆ ಇರುವುದಿಲ್ಲ.

ಇ) ಬಂದಿದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)?

ಗುಡಿಬಂಡೆ ಪಟ್ಟಣ ಪಂಚಾಯಿತಿಯನ್ನು ಕೇಂದ್ರ ಪುರಸ್ಕೃತ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಮೂಲಸೌಕರ್ಯಗಳ ಅಭಿವೃದ್ಧಿ ಯೋಜನೆಯಡಿಯಲ್ಲಿ (UIDMSSMT) ರಸ್ತೆ ಮತ್ತು ಚರಂಡಿ ಯೋಜನೆ ಮತ್ತು ಒಳಚರಂಡಿ ಯೋಜನೆಗಳನ್ನು ಪ್ರಸ್ತಾಪಿಸಿದ್ದು ಭಾರತ ಸರ್ಕಾರದ ಪರಿಶೀಲನೆಯಲ್ಲಿದೆ.

ಸ್ವರ್ಣ ಜಯಂತಿ ಶಹರಿ ರೋಜಗಾರ್ ಯೋಜನೆಯಡಿ ಬಡತನ ನಿರ್ಮೂಲನಾ ಕಾರ್ಯಕ್ರಮಗಳಿಗೆ 2008–09ನೇ ಸಾಲಿನಲ್ಲಿ ರೂ.5.15 ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ ಹಾಗೂ ಸದರಿ ಸಾಲಿನಲ್ಲಿ ರೂ.10.13 ಲಕ್ಷಗಳ ವೆಚ್ಚವಾಗಿರುತ್ತದೆ.

ಕೆಎಂಆರ್‌ಪಿ ಯೋಜನೆಯಡಿ ಪುರಸಭಾ ಕಾರ್ಯಗಳ ಗಣಕೀಕರಣ (Computerisation) ಮತ್ತು ನಿಧಿ ಆಧಾರಿತ ಲೆಕ್ಕಪದ್ಧತಿ (FBAS) ಅನುಷ್ಠಾನಗೊಳ್ಳುತ್ತಿದೆ. 2008–09ನೇ ಸಾಲಿಗೆ ಎಸ್‌ಎಫ್‌ಸಿ ಮುಕ್ತನಿಧಿ ಅನುದಾನ ರೂ.1,28.04,673 ಕೋಟಿಗಳನ್ನು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. 2009–10ನೇ ಸಾಲಿಗೆ ಎಸ್.ಎಫ್.ಸಿ ರೂ.197.50 ಲಕ್ಷಗಳ ಹಂಚಿಕೆ ಮಾಡಿದೆ.